# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬಿ.ಇ.ಟಿ. ಸಂಯುಕ್ತ ಪದವಿ ಪೂರ್ವ ಕಾಲೇಜು, ಬಿಸ್ಮಿಲ್ಲಾ ನಗರ, ಬೆಂಗಳೂರು-29 ಇಲ್ಲಿನ ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ ಉಪನ್ಯಾಸಕರ ಹುದ್ದೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸುವ ಬಗ್ಗೆ.

ಓದಲಾಗಿದೆ :- 1)ಸರ್ಕಾರದ ಆದೇಶ ಸಂಖ್ಯೆ:ಇಡಿ 55 ಟಿಪಿಯು 2011 ದಿನಾಂಕ :10-09-2012.

2) ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ :ಪಪೂಶಿ/ಸಿಬ್ಬಂದಿ-3/ಎಎಸ್221/ವೇತನ.ಅನು/2017-18 ದಿನಾಂಕ :03-07-2017 ಮತ್ತು ದಿನಾಂಕ :13-12-2017.

3) ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ, ಬೆಂಗಳೂರು ಇವರ ಪತ್ರ ಸಂಖ್ಯೆ :ಪಪೂಶಿಇ/ಉನಿ-ಎಎಸ್/ಖಾ.ಹು.ಮಾ/03/2018-19 ದಿನಾಂಕ :13-06-2018.

* * * *

ಪ್ರಸ್ತಾವನೆ:-

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಬಿಸ್ಮಿಲ್ಲಾ ಶಿಕ್ಷಣ ಟ್ರಸ್ಟ್(ರಿ), ಬಿಸ್ಮಿಲ್ಲಾ ನಗರ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-20 ಇವರ ವತಿಯಿಂದ ನಡೆಯುತ್ತಿರುವ ಬಿ.ಇ.ಟಿ. ಸಂಯುಕ್ತ ಪದವಿ ಪೂರ್ವ ಕಾಲೇಜು, ಬಿಸ್ಮಿಲ್ಲಾ ನಗರ, ಬೆಂಗಳೂರು-29 ಇಲ್ಲಿನ 04 ಉಪನ್ಯಾಸಕರು ಮತ್ತು 01 ಬೋಧಕೇತರ ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ. ಈ ಸಂದರ್ಭದಲ್ಲಿ ಅನುದಾನಕ್ಕೆ ಒಳಪಡಿಸದಿರುವ ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ ಉಪನ್ಯಾಸಕರ ಹುದ್ದೆಗಳನ್ನು ಈಗ ಅನುದಾನಕ್ಕೆ ಒಳಪಡಿಸಲು ಪ್ರಸ್ತಾಪಿಸಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ರಸಾಯನಶಾಸ್ತ್ರ ಉಪನ್ಯಾಸಕರ ಹುದ್ದೆಗೆ ಕುಮಾರಿ ತಸ್ನೀಮ್ ಖಾನಮ್ ಇವರನ್ನು ಮತ್ತು ಜೀವಶಾಸ್ತ್ರ ಉಪನ್ಯಾಸಕರ ಹುದ್ದೆಗೆ ಶ್ರೀಮತಿ ಸುಗ್ರ ಬೇಗಂ ಇವರನ್ನು ನೇಮಕಾತಿ ಮಾಡಿಕೊಂಡು, ಅನುದಾನಕ್ಕೆ ಒಳಪಡಿಸಲು ಪ್ರಸ್ತಾಪಿಸಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಇವರುಗಳ ನೇಮಕಾತಿಯನ್ನು ಜಿಲ್ಲಾ ಪರಿಶೀಲನಾ ಸಮಿತಿಯು ಅನುದಾನರಹಿತ ಅನುಮೋದನೆ ಮಾಡಿ, ಇವರುಗಳನ್ನು ಅನುದಾನಕ್ಕೆ ಒಳಪಡಿಸಲು ಶಿಫಾರಸ್ಸು ಮಾಡಿತ್ತು. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಜಿಲ್ಲಾ ಪರಿಶೀಲನಾ ಸಮಿತಿಯು ರಸಾಯನಶಾಸ್ತ್ರ ಉಪನ್ಯಾಸಕರ ಹುದ್ದೆಗೆ ದಿನಾಂಕ :11-08-2014ರಂದು ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವ ಕುಮಾರಿ ತಸ್ನೀಮ್ ಖಾನಮ್ ಇವರ ನೇಮಕಾತಿಯನ್ನು ಮತ್ತು ಜೀವಶಾಸ್ತ್ರ ಉಪನ್ಯಾಸಕರ ಹುದ್ದೆಗೆ ದಿನಾಂಕ :01-06-2010ರಂದು ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವ ಶ್ರೀಮತಿ ಸುಗ್ರ ಬೇಗಂ ಇವರುಗಳ ನೇಮಕಾತಿಯನ್ನು ಜಿಲ್ಲಾ ಪರಿಶೀಲನಾ ಸಮಿತಿಯು ಅನುದಾನರಹಿತವಾಗಿ ಅನುಮೋದಿಸಿದೆ ಮತ್ತು ಇವರುಗಳ ನೇಮಕಾತಿಯನ್ನು ಅನುದಾನಕ್ಕೆ ಒಳಪಡಿಸಲು ನಿಗದಿತ ಚೆಕ್‌ಲಿಸ್ಟ್‌ನಲ್ಲಿನ ಮಾಹಿತಿಯೊಂದಿಗೆ ಶಿಫಾರಸ್ಸು ಮಾಡಿ ನಿರ್ದೇಶಕರಿಗೆ ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರು ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಇವರುಗಳನ್ನು ಅನುದಾನಕ್ಕೆ ಒಳಪಡಿಸಲು ಶಿಫಾರಸ್ಸು ಮಾಡಿರುತ್ತಾರೆ. ಪ್ರಸ್ತಾಪಿತ ಎರಡೂ ಉಪನ್ಯಾಸಕರುಗಳಿಗೆ ನಿಗದಿತ ಕಾರ್ಯಭಾರ ಇಲ್ಲದಿರುವುದರಿಂದ ಇವರುಗಳನ್ನು ಖಾಲಿ ಇರುವ ಹುದ್ದೆಗೆ ನಿಯೋಜಿಸಿ, ಕಾರ್ಯಭಾರ ಸರಿದೂಗಿಸಲು ಸದರಿ ವಿಷಯಗಳ ಖಾಲಿ ಹುದ್ದೆಗಳ ವಿವರಗಳನ್ನು ಮೇಲೆ (3) ರಲ್ಲಿ ಓದಲಾದ ಪತ್ರದಲ್ಲಿ ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ ಇವರು ಸಲ್ಲಿಸಿರುತ್ತಾರೆ.

ಜಿಲ್ಲಾ ಪರಿಶೀಲನಾ ಸಮಿತಿಯ ಶಿಫಾರಸ್ಸನ್ನು ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರ ಪ್ರಸ್ತಾವನೆಯನ್ನು ಮತ್ತು ಜಿಲ್ಲಾ ಉಪ ನಿರ್ದೇಶಕರ ವರದಿಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಡಿ 86 ಟಿಪಿಯು 2017,**
**ಬೆಂಗಳೂರು, ದಿನಾಂಕ: 23ನೇ ಅಕ್ಟೋಬರ್ 2018.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಹಿನ್ನೆಲೆಯಲ್ಲಿ ಬಿಸ್ಮಿಲ್ಲಾ ಶಿಕ್ಷಣ ಟ್ರಸ್ಟ್(ರಿ), ಬಿಸ್ಮಿಲ್ಲಾ ನಗರ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-20 ಇವರ ವತಿಯಿಂದ ನಡೆಯುತ್ತಿರುವ ಬಿ.ಇ.ಟಿ. ಸಂಯುಕ್ತ ಪದವಿ ಪೂರ್ವ ಕಾಲೇಜು, ಬಿಸ್ಮಿಲ್ಲಾ ನಗರ, ಬೆಂಗಳೂರು-29 ಇಲ್ಲಿನ ರಸಾಯನಶಾಸ್ತ್ರ ಉಪನ್ಯಾಸಕರಾದ ಕುಮಾರಿ ತಸ್ನೀಮ್ ಖಾನಮ್ ಇವರ ನೇಮಕಾತಿಯನ್ನು ಮತ್ತು ಜೀವಶಾಸ್ತ್ರ ಉಪನ್ಯಾಸಕರಾದ ಶ್ರೀಮತಿ ಸುಗ್ರ ಬೇಗಂ ಇವರುಗಳ ನೇಮಕಾತಿಯನ್ನು ಈ ಆದೇಶ ಹೊರಡಿಸಿದ ದಿನಾಂಕದಿಂದ ಭವಿಷ್ಯಾನ್ವಯವಾಗಿ, ಸರ್ಕಾರದ ಆದೇಶ ಸಂಖ್ಯೆ :ಇಡಿ 55 ಟಿಪಿಯು 2011 ದಿನಾಂಕ :10-09-2012ರಲ್ಲಿ ವಿಧಿಸಿರುವ ಷರತ್ತುಗಳಿಗೊಳಪಟ್ಟು ಹಾಗೂ ಈ ಕೆಳಕಂಡ ಷರತ್ತಿಗಳಿಗೊಳಪಟ್ಟು ಸಹಾಯಾನುದಾನಕ್ಕೆ ಒಳಪಡಿಸಿದೆ.

1) ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ(ವೇತನ, ನಿವೃತ್ತಿ ವೇತನ ಮತ್ತು ಇತರ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ, 2014ರನ್ವಯ ಸದರಿ ಸಿಬ್ಬಂದಿಗಳು ಅನುದಾನರಹಿತ ಅವಧಿಯಲ್ಲಿ ಸಲ್ಲಿಸಿದ ಸೇವೆಯನ್ನು ಯಾವುದೇ ಸೇವಾ ಸೌಲಭ್ಯಗಳಿಗೆ ಪರಿಗಣಿಸಲಾಗುವುದಿಲ್ಲವೆಂಬ ಷರತ್ತಿಗೆ ಬದ್ಧನಾಗಿರುತ್ತೇನೆ ಎಂದು ಸದರಿ ಉಪನ್ಯಾಸಕರಿಂದ ಮುಚ್ಚಳಿಕೆ ಪತ್ರವನ್ನು ಬರೆಸಿಕೊಂಡ ನಂತರವೇ ಸಹಾಯಾನುದಾನಕ್ಕೆ ಒಳಪಡಿಸುವ ಬಗ್ಗೆ ಮುಂದಿನ ಕ್ರಮವಹಿಸತಕ್ಕದ್ದು.

2) ನೇಮಕಾತಿ ಮಾಡುವ ಮುನ್ನ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿದ ವಿದ್ಯಾರ್ಹತೆ, ವಯೋಮಿತಿ ಹಾಗೂ ಮಿಸಲಾತಿ ಪಾಲಿಸಿ, ಪಾರದರ್ಶಕವಾಗಿ ನೇಮಕಾತಿ ಮಾಡಿಕೊಂಡಿರುವುದನ್ನು ದಾಖಲೆಗಳಿಂದ ದೃಢಪಡಿಸಿಕೊಳ್ಳತಕ್ಕದ್ದು.

3) ಸದರಿ ಹುದ್ದೆಯು, ಅನುದಾನ ಸಂಹಿತೆಯನ್ವಯ ಈಗಾಗಲೇ ಮಂಜೂರು ಮಾಡಿರುವ ಹುದ್ದೆಗಳು ಸೇರಿದಂತೆ ಒಟ್ಟಾರೆ ಹುದ್ದೆಗಳು ಸಿಬ್ಬಂದಿ ಮಾದರಿ ಮಿತಿಯಲ್ಲಿರತಕ್ಕದ್ದು.

4) ನಿಗದಿತ ಕಾರ್ಯಭಾರ ಇಲ್ಲದಿರುವುದರಿಂದ ಇಲ್ಲಿನ ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ ಉಪನ್ಯಾಸಕರನ್ನು ವಿಜಯ ಪದವಿ ಪೂರ್ವ ಕಾಲೇಜು, ಜಯನಗರ, ಬೆಂಗಳೂರು ಇಲ್ಲಿ ಖಾಲಿ ಇರುವ ಅನುದಾನಿತ ರಸಾಯನಶಾಸ್ತ್ರ ಮತ್ತು ಜೀವಶಾಸ್ತ್ರ ಉಪನ್ಯಾಸಕರ ಹುದ್ದೆಗಳಿಗೆ ವಾರದಲ್ಲಿ ಮೂರು ದಿನ ನಿಯೋಜಿಸಿ, ಕಾರ್ಯಭಾರ ಸರಿದೂಗಿಸತಕ್ಕದ್ದು.

5) ಮೇಲಿನಂತೆ ಸಂಬಂಧಿಸಿದ ಉಪನ್ಯಾಸಕರು ನಿಯೋಜನೆ ಮಾಡಿರುವ ಕಾಲೇಜಿನಲ್ಲಿ ವಾರದಲ್ಲಿ ಮೂರು ದಿನ ಕಾರ್ಯನಿರ್ವಹಿಸಿದ ಬಗ್ಗೆ ಪ್ರತೀ ತಿಂಗಳು ಸಂಬಂಧಿಸಿದ ಕಾಲೇಜಿನಿಂದ ದೃಢೀಕರಿಸಿಕೊಂಡು ವೇತನ ಬಿಡುಗಡೆ ಮಾಡತಕ್ಕದ್ದು.

6) ಈ ಆದೇಶ ಹೊರಡಿಸಿದ ದಿನಾಂಕದಿಂದ ಮಾತ್ರ ವೇತನಾನುದಾನಕ್ಕೆ ಪರಿಗಣಿಸಬೇಕೇ ಹೊರತು ಯಾವುದೇ ಕಾರಣಕ್ಕೂ ಸಹ ಹಿಂದಿನ ಸೇವೆಯನ್ನು ವೇತನಾನುದಾನಕ್ಕೆ ಪರಿಗಣಿಸತಕ್ಕದ್ದಲ್ಲ.

7) ಎರಡೂ ಕಾಲೇಜುಗಳಲ್ಲಿ ಮೇಲೆ (4)ರಂತೆ ಅವಕಾಶ ಕಲ್ಪಿಸಲು ಬೋಧನಾ ವೇಳೆಪಟ್ಟಿಯನ್ನು ಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು.

--

ಈ ..ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ . ಸಂಖ್ಯೆ :ಆಇ 193 ವೆಚ್ಚ-8/2018 ದಿನಾಂಕ :11-04-2016ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೇಖರ) 23/10/2018
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ(ಪದವಿ ಪೂರ್ವ ಶಿಕ್ಷಣ).

ಇವರಿಗೆ:-

1. ಮಹಾಲೇಖಪಾಲರು, (ಎ ಅಂಡ್ ಇ) ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 012.
3. ಜಿಲ್ಲಾಧಿಕಾರಿಗಳು, ಬೆಂಗಳೂರು ದಕ್ಷಿಣ ಜಿಲ್ಲೆ, ಬೆಂಗಳೂರು.
4. ಜಿಲ್ಲಾ ನೋಂದಣಾಧಿಕಾರಿಗಳು, ಬೆಂಗಳೂರು ದಕ್ಷಿಣ ಜಿಲ್ಲೆ, ಬೆಂಗಳೂರು.
5. ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ, ಬೆಂಗಳೂರು.
6. ಅಧ್ಯಕ್ಷರು/ಕಾರ್ಯದರ್ಶಿಗಳು, ಬಿಸ್ಮಿಲ್ಲಾ ಶಿಕ್ಷಣ ಟ್ರಸ್ಟ್(ರಿ), ಬಿಸ್ಮಿಲ್ಲಾ ನಗರ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-20.
7. ಪ್ರಾಂಶುಪಾಲರು, ಬಿ.ಇ.ಟಿ. ಸಂಯುಕ್ತ ಪದವಿ ಪೂರ್ವ ಕಾಲೇಜು, ಬಿಸ್ಮಿಲ್ಲಾ ನಗರ, ಬೆಂಗಳೂರು-29.
8. ಪ್ರಾಂಶುಪಾಲರು, ವಿಜಯ ಪದವಿ ಪೂರ್ವ ಕಾಲೇಜು, ಜಯನಗರ, ಬೆಂಗಳೂರು.
9. ಶಾಖಾ ರಕ್ಷಾ ಕಡತ // ಹೆಚ್ಚುವರಿ ಪ್ರತಿಗಳು.